**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು**
**ಇಂಡಿ.**
**ಸಿಸಿ.ನಂಃ 130/2012**

**ಪಿ.ಡಬ್ಲ್ಯೂ-2**
**ಸಿ.ಡಬ್ಲ್ಯೂ-8**

| | | |
|---|---|---|
| ಸಾಕ್ಷಿಯ ಹೆಸರು | : | ಮಹಮ್ಮದ ಷರೀಪ ಇಂಡಿಕರ. |
| ತಂದೆ/ಗಂಡನ ಹೆಸರು | : | ಮಹಮ್ಮದ ಹನೀಪ |
| ವಯಸ್ಸು | : | 66 ವರ್ಷ |
| ಉದ್ಯೋಗ | : | ನಿವೃತ್ತ ಪಿ.ಎಸ್.ಐ. |
| ವಾಸಸ್ಥಳ | : | ವಿಜಯಪೂರ. |

**ದಿನಾಂಕಃ 24-01-2020 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆಃ ಮಾನ್ಯ ಸ. ಸ.ಅ ರವರಿಂದ:**

ನಾನು ಸನ್ 2009 ರಿಂದ 2011 ರವರೆಗೆ ಎ.ಎಸ್.ಐ. ಅಂತಾ ಚಡಚಣ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ. ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ದಿ: 21–09–2011 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರಿಂದ ಲಿಖಿತ ದೂರು, ಪಂಚನಾಮೆ, ವಶಪಡಿಸಿಕೊಂಡ ಮದ್ಯ ಬಾಟಲಗಳನ್ನು ಮತ್ತು ಮೊಬೈಲ ಹಾಗೂ ಆರೋಪಿಯನ್ನು ತೆಗೆದುಕೊಂಡು ಪ್ರಕರಣವನ್ನು ದಾಖಲಿಸಿ, ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾದಿಕಾರಿಗಳಿಗೆ ಸಲ್ಲಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ 4 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಆರೋಪಿಯನ್ನು ದಸ್ತಗಿರಿ ಕ್ರಮ ಜರುಗಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಪ್ರಕರಣದಲ್ಲಿ ಜಪ್ತಾದ ಮುದ್ದೆಮಾಲಿನ ಪಿ.ಎಫ್. ಭರಾಯಿಸಿಕೊಂಡಿರುತ್ತೇನೆ. ನಂತರ ನನಗೆ ವರ್ಗಾವಣೆಯಾಗಿದ್ದರಿಂದ ಮುಂದಿನ ತನಿಖೆಯನ್ನು ಚಾಸಾ 1 ರವರಿಗೆ ನೀಡಿರುತ್ತೇನೆ.

ಈಗ ನೋಡುತ್ತಿರುವ ದಾಖಲೆಯು ನಾನು ಸ್ವೀಕರಿಸಿದ ದೂರು ಆಗಿರುತ್ತದೆ. ಅದನ್ನು ಈಗ ನಿಪಿ: 1 ಎಂದು, ಸಾಕ್ಷಿಯು ಸಹಿಯನ್ನು ನಿಪಿ: 1(ಎ) ಎಂದು ಗುರುತಿಸಲಾಯಿತು. ಈಗ ನೋಡುತ್ತಿರುವ ದಾಖಲೆಯು ಪ್ರ.ವ.ವರದಿಯಾಗಿರುತ್ತದೆ. ಅದನ್ನು ಈಗ ನಿಪಿ: 2 ಎಂದು, ಸಾಕ್ಷಿಯು ಸಹಿಯನ್ನು ನಿಪಿ: 2(ಎ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ನ್ಯಾಯಾಲಯದ ಮುಂದೆ ಇರುವ ಮು.ಮಾ 1 ನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು: ಆರೋಪಿ ಪರ ಶ್ರೀ: ಎಸ್.ಆರ್.ಬಿ.:**

ಚಾಸಾ 1 ರವರು ಅಂಕಿ ಸಂಖ್ಯೆಗೋಸ್ಕರ ದಾಖಲಿಸಿದ ದೂರಿನನ್ವಯ ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಮಾನತ್ತುಪಡಿಸಿಕೊಂಡ ಬಂದ ಮೊಬೈಲಿನ ಸೀಮ್ ನಂಬರ ಮತ್ತು ಯಾವ ಕಂಪನಿಯ ಸೀಮ್ ಇತ್ತು, ಅದರ ಬಣ್ಣ ಯಾವುದು ಎಂಬುದರ ಬಗ್ಗೆ ವಿಚಾರಣೆ ಮಾಡಿರುವುದಿಲ್ಲ. ಆರೋಪಿತರು ಯಾವುದೇ ತಪ್ಪು ಮಾಡದೆ ಇದ್ದರೂ ಸಹ ಆರೋಪಿತರ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿ ಅದಕ್ಕನುಗುಣವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ 1 ರಂತಹ ಟೇಟ್ರಾ ಪ್ಯಾಕೆಟಗಳು ಬೇರೆ ಕಡೆ ಸಿಗುತ್ತವೆ ಎಂದರೆ ನನಗೆ ಗೊತ್ತಿಲ್ಲ. ಜಪ್ತುಪಡಿಸಿಕೊಂಡ ಮೋಬೈಲನಂತಹ ಮೊಬೈಲುಗಳು ಹೊರಗಡೆ ಸಿಗುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**
**ಸಹಿ/-**
**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ..**